ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 978(1074)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಸರ್ಕಾರಿ ಶಾಲಾ-ಕಾಲೇಜುಗಳಲ್ಲಿನ ಮೂಲಭೂತ ಸೌಕರ್ಯಗಳ ಬಗ್ಗೆ

(ಅ) ಹಾಸನ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಶಾಲಾ-ಕಾಲೇಜುಗಳಿವೆ; ಈ ಶಾಲೆಗಳು ಸ್ವಂತ ಕಟ್ಟಡಗಳನ್ನು ಹೊಂದಿವೆಯೇ; ಹೊಂದಿದ್ದಲ್ಲಿ, ಇವು ಸುಸ್ಥಿತಿಯಲ್ಲಿವೆಯೇ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಮತ್ತು ಶಿಥಿಲಗೊಂಡು ಬಳಕೆಗೆ ಯೋಗ್ಯವಿರದ ಸರ್ಕಾರಿ ಶಾಲೆಗಳೆಷ್ಟು; ಇಂತಹ ಶಾಲಾ-ಕಾಲೇಜುಗಳನ್ನು ನಡೆಸಲು ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೇ; ಈ ಶಾಲೆಗಳನ್ನು ಪುನರ್‌ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಶಾಲಾವಾರು ಮಾಹಿತಿ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಶಿಥಿಲಗೊಂಡಿರುವ ಎಷ್ಟು ಸರ್ಕಾರಿ ಶಾಲೆ-ಕಾಲೇಜುಗಳನ್ನು ಪುನರ್ ನಿರ್ಮಾಣ/ರಿಪೇರಿ ಮಾಡಲಾಗಿದೆ; ಇಲ್ಲಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇದಕ್ಕಾಗಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು; (ಶಾಲಾವಾರು ಮಾಹಿತಿ ನೀಡುವುದು)

(ಈ) ಹಾಸನ ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಶಾಲಾವಾರು ಮಾಹಿತಿ ನೀಡುವುದು)